# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **870**

ಸದಸ್ಯರ ಹೆಸರು : **ಶ್ರೀ ಟಿ. ಎನ್. ಜವರಾಯಿ ಗೌಡ (ವಿಧಾನಸಭಾ ಕ್ಷೇತ್ರ)**

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 11-03-2026

| ಪ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸಾರಿಗೆ ಇಲಾಖೆಯಿಂದ ವಿತರಿಸುವ ಡಿ.ಎಲ್/ಆರ್.ಸಿ ಇತರೆ ದಾಖಲೆಗಳನ್ನು ಪಡೆಯಲು ಅಥವಾ ನೋಂದಣಿ ಮಾಡಲು ಆನ್‌ಲೈನ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ: | ಹೌದು, ಆನ್‌ಲೈನ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ |
| (ಆ) | ಹಾಗಿದ್ದಲ್ಲಿ, ಈ ವ್ಯವಸ್ಥೆಯು ಮುಂಚಿನ ಮ್ಯಾನ್ಯುಯಲ್‌ಗಿಂತಲೂ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು): | ನಾಗರಿಕರು ಆನ್ ಲೈನ್ ಮೂಲಕ ಕಲಿಕಾ / ಚಾಲನಾ ಅನುಜ್ಞಾ ಪತ್ರ, ನೋಂದಣಿ ಪ್ರಮಾಣಪತ್ರ ಮತ್ತು ರಹದಾರಿ ಸೇವೆಗಳಿಗೆ ಅರ್ಜಿ ಸಲ್ಲಿಸಿ ಸೇವೆಯನ್ನು ಪಡೆಯಲು ಅವಕಾಶ ಕಲ್ಪಿಸಿರುವುದರಿಂದ ಈ ಹಿಂದಿನ ಮ್ಯಾನ್ಯುಯಲ್ ವ್ಯವಸ್ಥೆಯಡಿ ನೀಡಲಾಗುತ್ತಿದ್ದ ಸೇವೆಗಳಿಗಿಂತ ವೇಗವಾಗಿ ಸೇವೆಯನ್ನು ನಾಗರಿಕರು ಪಡೆಯಬಹುದಾಗಿರುತ್ತದೆ ಮತ್ತು ಸೇವೆಗಳ ವಿತರಣೆಯಲ್ಲಿ ಯಾವುದೇ ವಿಳಂಬವಾಗುತ್ತಿರುವುದಿಲ್ಲ.<br><br>ಸಾರಥಿಗೆ ಸಂಬಂಧಿಸಿದ 15 ಸೇವೆಗಳಿಗೆ ಮತ್ತು ವಾಹನ್‌ಗೆ ಸಂಬಂಧಿಸಿದ 9 ಸೇವೆಗಳಿಗೆ ಪ್ರಾದೇಶಿಕ ಸಾರಿಗೆ ಕಛೇರಿಗಳಿಗೆ ಭೇಟಿ ನೀಡದೆಯೇ ಸಾರ್ವಜನಿಕರು ಆನ್‌ಲೈನ್ ಮೂಲಕ ಸೇವೆಯನ್ನು ತ್ವರಿತವಾಗಿ ಪಡೆಯುವ ಅವಕಾಶ ಕಲ್ಪಿಸಲಾಗಿರುತ್ತದೆ. |
| (ಇ) | ರೈತರು ಅವಿದ್ಯಾವಂತರು ಆನ್‌ಲೈನ್ ಮೂಲಕ ಡಿ.ಎಲ್/ಆರ್.ಸಿ. ಇತರೆ ದಾಖಲೆಗಳನ್ನು ಪಡೆಯಲು ಕಂಪ್ಯೂಟರ್ ತಿಳುವಳಿಕೆ ಇಲ್ಲದಿರುವುದರಿಂದ ಮತ್ತೆ ಮಧ್ಯವರ್ತಿಗಳ ಬಳಿಯೇ ಹೋಗಬೇಕಾಗಿರುವುದು ಹಾಗೂ ಇದಕ್ಕಾಗಿ ಹೆಚ್ಚಿಗೆ ಹಣವನ್ನು ನೀಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ರಾಜ್ಯದ ಎಲ್ಲಾ ಅಧೀನ ಕಛೇರಿಗಳಲ್ಲಿ ಸಹಾಯ ಮೇಜನ್ನು (HELP DESK) ಪ್ರವೇಶ ದ್ವಾರದ ಬಳಿ ಕಡ್ಡಾಯವಾಗಿ ನಿರ್ವಹಿಸುತ್ತಿದ್ದು, ಅಲ್ಲಿ ಕರ್ತವ್ಯ ನಿರ್ವಹಿಸುವ ನೌಕರರು ಕಛೇರಿಗೆ ಭೇಟಿ ನೀಡುವ ಸಾರ್ವಜನಿಕರ ವಿವರಗಳನ್ನು ಪಡೆದು ಅವರಿಗೆ ಕಛೇರಿ ಕೆಲಸಗಳಿಗೆ ಅನುವಾಗುವಂತ ಸೂಕ್ತ ಮಾಹಿತಿ/ ಸಲಹೆಗಳನ್ನು ನೀಡಲಾಗುತ್ತಿದೆ. |
| (ಈ) | ಹಾಗಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು: (ವಿವರ ನೀಡುವುದು): | ಅಧೀನ ಕಛೇರಿಗಳಲ್ಲಿ ಸಹಾಯ ಮೇಜು (HELP DESK) ಜೊತೆಗೆ ಸಾರ್ವಜನಿಕರು ಅನಧಿಕೃತ ವ್ಯಕ್ತಿಗಳನ್ನು ಸಂಪರ್ಕಿಸದೇ ನೇರವಾಗಿ ಕಛೇರಿಯ ಅಧಿಕಾರಿ/ ಸಿಬ್ಬಂದಿಯವರನ್ನು ಭೇಟಿ ಮಾಡಿ ಅವರ ಕೆಲಸಗಳನ್ನು |

| ಪ್ರ.ಸಂ. | ಪ್ರಶ್ನೆ | ಉತ್ತರ |
| --- | --- | --- |
| | | ಮಾಡಿಸಿಕೊಳ್ಳಬೇಕೆಂದು ಕಛೇರಿಯ ಆವರಣದಲ್ಲಿ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ. |
| (ಉ) | ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವ ಸಲುವಾಗಿ ಇಲಾಖಾ ವತಿಯಿಂದಲೇ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲು ಹೆಲ್ಪ್ ಡೆಸ್ಕ್ ಸ್ಥಾಪಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ರಾಜ್ಯ ಎಲ್ಲಾ ಅಧೀನ ಕಛೇರಿಗಳಲ್ಲಿ ಸಹಾಯ ಮೇಜನ್ನು(HELP DESK) ಪ್ರವೇಶ ದ್ವಾರದ ಬಳಿ ಸ್ಥಾಪಿಸಲಾಗಿರುತ್ತದೆ. ಸಾರ್ವಜನಿಕರ ಕೆಲಸಗಳಿಗೆ ಅನಗತ್ಯ ವಿಳಂಬ ಮಾಡಿದಲ್ಲಿ ಮಾನ್ಯ ಲೋಕಾಯುಕ್ತ ಸಂಸ್ಥೆಯನ್ನು ಸಂಪರ್ಕಿಸುವಂತೆ ಅವರ ಕಛೇರಿ ವಿಳಾಸ ಮತ್ತು ದೂರವಾಣಿ ಸಂಖ್ಯೆಗಳ ವಿವರಗಳ ಮಾಹಿತಿಯನ್ನು ಸೂಚನಾ ಫಲಕಗಳಲ್ಲಿ ಪ್ರದರ್ಶಿಸಲಾಗಿದೆ.<br><br>ವಾಹನಗಳಿಗೆ ಸಂಬಂಧಪಟ್ಟ ಸೇವೆಗಳಿಗೆ ಅರ್ಜಿದಾರರು ಆನ್‌ಲೈನ್‌ನಲ್ಲಿ ಅಥವಾ ನೇರವಾಗಿ ಕಛೇರಿಗೆ ಹಾಜರಾಗಿ, ಅಧಿಕಾರಿಗಳನ್ನು ಸಂಪರ್ಕಿಸಿ ಕಛೇರಿಯಲ್ಲಿಯೇ ಶುಲ್ಕವನ್ನು ಪಾವತಿಸಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಟಿಡಿ 282 ಟಿಡಿಒ 2021, ದಿನಾಂಕ:15-12-2021 ಮತ್ತು 23-05-2022 ರಲ್ಲಿ ರಾಜ್ಯದ ಎಲ್ಲಾ ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮುದ್ರಿತವಾಗುವ ಚಾಲನಾ ಅನುಜ್ಞಾ ಪತ್ರ ಮತ್ತು ನೋಂದಣಿ ಪ್ರಮಾಣ ಪತ್ರಗಳ ಸ್ಮಾರ್ಟ್ ಕಾರ್ಡ್‌ಗಳನ್ನು ಅರ್ಜಿದಾರರಿಗೆ ಸ್ಪೀಡ್ ಪೋಸ್ಟ್ ಮುಖಾಂತರ ರವಾನಿಸಲು ಆದೇಶಿಸಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಅಂಚೆ ಇಲಾಖೆಯೊಂದಿಗೆ ಒಪ್ಪಂದ ಮಾಡಿಕೊಂಡು ಸೆಪ್ಟೆಂಬರ್-2023 ರಿಂದ ಅಧೀನ ಕಛೇರಿಗಳಲ್ಲಿ ಮುದ್ರಿತವಾಗುವ ಹೊಸ ಚಾಲನಾ ಅನುಜ್ಞಾ ಪತ್ರ (DL) ಮತ್ತು ಹೊಸ ನೋಂದಣಿ ಪ್ರಮಾಣಪತ್ರ (RC) ಸ್ಮಾರ್ಟ್ ಕಾರ್ಡ್ ಗಳನ್ನು ಅರ್ಜಿದಾರರಿಗೆ ಸ್ಪೀಡ್ ಪೋಸ್ಟ್ ಮುಖಾಂತರ ರವಾನಿಸಲಾಗುತ್ತಿದೆ |

**ಟಿಡಿ 13 ಟಿಡಿಕ್ಯೂ 2026**

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು.